# ಡಿ.ಸಿ.ಆರ್.ನಲ್ಲಿ 'ಜಾಗರೂಕತೆ ತಿಳುವಳಿಕಾ ಸಪ್ತಾಹ-2019'ರ ಸಮಾರೋಪ ಸಮಾರಂಭ



ಪುತ್ತೂರು: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಂಗಳೂರು, ತಾಲೂಕು ಕಾನೂನು ಸೇವೆಗಳ ಸಮಿತಿ, ಪುತ್ತೂರು, ನ್ಯಾಯವಾದಿಗಳ ಸಂಘ ಪುತ್ತೂರು ಮತ್ತು ಭಾರತೀಯ ಗೇರು ಸಂಶೋಧನಾ ನಿರ್ದೇಶನಾಲಯ, ಪುತ್ತೂರು ಇವರ ಸಂಯುಕ್ತ ಆಶ್ರಯದಲ್ಲಿ ಅ.28ರಿಂದ ನ.2ರವರೆಗೆ ನಡೆದ 'ಜಾಗರೂಕತೆ ತಿಳುವಳಿಕಾ ಸಪ್ತಾಹ-2019'ರ ಸಮಾರೋಪ ಸಮಾರಂಭವನ್ನು ನ.1ರಂದು ಮೊಟ್ಟೆತ್ತಡ್ಕದಲ್ಲಿರುವ ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ ಆಚರಿಸಲಾಯಿತು.

5ನೇ ಹೆಚ್ಚುವರಿ ಜಿಲ್ಲಾ ಸೆಷನ್ಸ್ ನ್ಯಾಯಾಧೀಶ ರುಡೋಲ್ಫ್ ಪಿರೇರಾರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಸಮಗ್ರತೆಯು ವ್ಯಕ್ತಿಗತ ಮೌಲ್ಯವಾಗಿದ್ದು, ಕಾನೂನು ಪಾಲನೆ ಮತ್ತು ಆಜ್ಞೆಯು ನಾಗರಿಕ ಸಮಾಜದ ಅವಿಭಾಜ್ಯ ಅಂಗವೆಂದು ಹೇಳಿದರು. ಮಂಜುನಾಥ, ಪ್ರಧಾನ ಹಿರಿಯ ವ್ಯವಹಾರಿಕ ನ್ಯಾಯಾಧೀಶ, ಎ.ಸಿ.ಜೆ.ಎಂ. ಹಾಗೂ ತಾಲೂಕು ಕಾನೂನು ಸೇವೆಗಳ ಸಮಿತಿ ಅಧ್ಯಕ್ಷ ಮಂಜುನಾಥ್, ವಕೀಲರ ಸಂಘದ ಪದಾಧಿಕಾರಿಗಳಾದ ಸುರೇಶ್ ರೈ ಪಡ್ಡಂಬೈಲು, ಶ್ರೀಮತಿ ಮಮತಾ ಸುವರ್ಣ ಅತಿಥಿಗಳಾಗಿ ಭಾಗವಹಿಸಿದರು. ವಕೀಲರ ಸಂಘದ ನಿಕಟಪೂರ್ವ ಅಧ್ಯಕ್ಷ ಭಾಸ್ಕರ ಕೋಡಿಂಬಾಳ ಉಪಸ್ಥಿತರಿದ್ದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ ನ್ಯಾಯವಾದಿ ಸೂರ್ಯನಾರಾಯಣ ಎನ್.ಕೆ., ವಕೀಲರು, ಪುತ್ತೂರುರವರು 'ಸಮಗ್ರತೆ- ಜೀವನದ ಒಂದು ಮಾರ್ಗ' ಎಂಬ ವಿಷಯದ ಬಗ್ಗೆ ಅಭಿಪ್ರಾಯ ಮಂಡಿಸುತ್ತಾ ಸಮಗ್ರತೆ ಮತ್ತು ಪ್ರಾಮಾಣಿಕತೆಯನ್ನು ನಾವು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜೀವನ ಒಳ್ಳೆಯದಾಗಿ ನಡೆಸುವುದು ನಮ್ಮ ಗುರಿಯಾಗಿರಬೇಕು ಎಂದರು. ಗೇರು ಸಂಶೋಧನಾ ನಿರ್ದೇಶನಾಲಯದ ಪ್ರಭಾರ ನಿರ್ದೇಶಕ ಡಾ. ಎಂ.ಜಿ. ನಾಯಕರವರು ಅಧ್ಯಕ್ಷತೆ ವಹಿಸಿದ್ದರು. ಸಂಸ್ಥೆಯ ಪ್ರಧಾನ ತಾಂತ್ರಿಕ ಅಧಿಕಾರಿ, ಮುರಳಿಕೃಷ್ಣರವರು ಸ್ವಾಗತಿಸಿದರು. ನ್ಯಾಯವಾದಿ ಶ್ರೀಮತಿ ಹರಿಣಾಕ್ಷಿ ಜೆ.ಶೆಟ್ಟಿ ವಂದಿಸಿದರು.